ಕರ್ನಾಟಕ ರಾಜ್ಯ ಪತ್ರಾಗಾರ,
ಗ್ರಂಥಾಲಯ,

ಇ) ಪುರಸಭೆಯ ವಿನಂತಿಯ ಮೇರೆಗೆ ಹೊಸ ಸ್ಯಾಟಲೈಟ್ ಬಸ್ ನಿಲ್ದಾಣಗಳಿಗೆ ಒಳಚರಂಡಿ ಕಲ್ಪಿಸುವ ನಕ್ಷೆ ತಯಾರಿಸಲಾಗಿದ್ದು, ಅಂದಾಜನ್ನು ...ತಯಾರಿಸಲಾಗಿದೆ. ಸರ್ವೆ ಕೆಲಸವನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಪ್ರಾರಂಭಿಸಿದೆ.

ಈ) ಅಂದಾಜು ತಯಾರಿಸಿದ ನಂತರ ಯೋಜನೆಯ ವೆಚ್ಚ ಗೊತ್ತಾಗುತ್ತದೆ.

ಉ) ಅಂದಾಜು ವೆಚ್ಚದ ಶೇಕಡ 30 ರಷ್ಟನ್ನು ಸಾಲ ನೀಡಲು ಕ್ರಮ ಕೈಗೊಳ್ಳಲಾಗುವುದು.

೩೦,೬೩೪

ಬೈಲಹೊಂಗಲ ತಾಲ್ಲೂಕಿನ ನೇಸರ್ಗಿ ಗ್ರಾಮದಲ್ಲಿ ಸರ್ಕಾರಿ ಐ.ಟಿ.ಐ. ಪ್ರಾರಂಭ

311 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿ ಸರ್ಕಾರಿ ಐ.ಟಿ.ಐ. ಕಾಲೇಜನ್ನು ಪ್ರಾರಂಭಿಸುವ ಸಲುವಾಗಿ ಸರ್ಕಾರಕ್ಕೆ ಮನವಿಗಳು ಬಂದಿದೆಯೇ?

ಆ) ಹಾಗಿದ್ದಲ್ಲಿ ಇಲ್ಲಿ ಸರ್ಕಾರಿ ಐ.ಟಿ.ಐ ಕಾಲೇಜನ್ನು ಪ್ರಾರಂಭಿಸಲು ಸರ್ಕಾರದವರು ಯಾವ ಕ್ರಮ ಕೈಗೊಂಡಿರುವರು?

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಕಾರ್ಮಿಕ ಸಚಿವರು) :

ಅ) ಹೌದು

ಆ) ಹಣದ ಅಭಾವದಿಂದ ಸದ್ಯಕ್ಕೆ ಸ್ಥಾಪನೆ ಮಾಡಲು ಸಾಧ್ಯವಿಲ್ಲ.

ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ನಯಾನಗರ ಗ್ರಾಮದಲ್ಲಿ ಸರ್ಕಾರಿ ಪ್ರೀಮೆಟ್ರಿಕ್ಕುಲೇಟ್ ಹಾಸ್ಟೆಲ್ ಪ್ರಾರಂಭಿಸುವ ಬಗ್ಗೆ.

310 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕು ನಯಾನಗರ ಗ್ರಾಮದಲ್ಲಿ ಸರ್ಕಾರಿ ಪ್ರೀ ಮ್ಯಾಟ್ರಿಕ್ಯುಲೇಟ್ ಹಾಸ್ಟಲ್ ಪ್ರಾರಂಭಿಸುವ ಸಲುವಾಗಿ ಸರ್ಕಾರಕ್ಕೆ ಮನವಿಗಳು ಬಂದಿದೆಯೇ?

ಆ) ಹಾಗಿದ್ದಲ್ಲಿ ಇಲ್ಲಿ ಪ್ರೀ ಮ್ಯಾಟ್ರಿಕುಲೇಟ್ ಹಾಸ್ಟಲ್ ಪ್ರಾರಂಭಿಸಲು ಸರ್ಕಾರದವರು ಯಾವ ಕ್ರಮ ಕೈಗೊಂಡಿರುವರು?

ಇ) ಈ ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆಯಿದ್ದು ಆ ಶಾಲಾ ವಿದ್ಯಾರ್ಥಿಗಳಿಗೆ ಹಾಸ್ಟಲ್ ಸೌಲಭ್ಯವಿಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ನಯಾನಗರದಲ್ಲಿ ಸರ್ಕಾರದ ಪ್ರೌಢ ಶಾಲೆ ಇದ್ದು ಈ ಸ್ಥಳದಲ್ಲಿ ವಿದ್ಯಾರ್ಥಿನಿಲಯ ಪ್ರಾರಂಭಿಸುವ ಅವಶ್ಯಕತೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.